ಮೈಸೂರ ಗೆಜಿಟ್.

ನಂ. 47 ಸರ್ಕಾರದಿಂದ ಘಾಯಿಷ್ ಆದ್ದು. ಸನ 1889.

ಬೆಂಗಳೂರು, ಶನಿವಾರ, ನವೆಂಬರ್ ತಾ|| 23, ಸನ 1889.

☞ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೇ ಭಾಗ–ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ–ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೇ ವ ಇನಾಂ ಸೂಪರ್‌ಟೆಂಡೆಂಟರು, ಕಾಂಪ್ಟ್ರೋಲರವರು, ಪಬ್ಲಿಕ್ ವರ್ಕಸ್ ಆಫಿಸರ್‌ಗಳು, ಫಾರೆಸ್ಟು ಇನ್‌ಸ್ಪೆಕ್ಟರ್ ಜನರಲ್‌ಯವರು, ರಿಜಿಸ್ಟ್ರೇರ್ಸ ಇನ್‌ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟು ವ ಸೆಶನ್ಸ ಜಡ್ಜ್‌ರು, ಡಿ|| ಡೆಪ್ಯುಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜ್‌ರು, ಪೊಲೀಸ್ ಸೂಪರ್‌ಟೆಂಡೆಂಟರು, ಫಾರೆಸ್ಟು ಆಫಿಸರ್‌ಗಳು, ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ; ಕಾಲಸ್ಥಿತೀ ರಿಪೋರ್ಟುಗಳು; ಪೋಸ್ಟಾಫಿಸ್ ನೋಟಿಸ್‌ಗಳು.

3ನೇ ಭಾಗ–ಶ್ರೀಮತ್ ಮಹಾರಾಜ ರಾಜಾಸಾಹೆಬ್ ಬಹದೂರವರಿಂದ ಮಂಜೂರ್ಮಾಡಲ್ಪಟ್ಟ ಅಕ್ಟ್ಸಗಳು ವ ರೆಗ್ಯುಲೇಷನ್‌ಗಳು—ಇಲ್ಲ.

4ನೇ ಭಾಗ–ಸರ್ಕಾರೀ ಕಾಗದ ಪತ್ರಗಳು—ಇಲ್ಲ.

೧ನೆ ಭಾಗ.

ಶ್ರೀಮನ್ಮಹಾರಾಜ ರಾಜಾಸಾಹೆಬ್ ಬಹದೂರವರ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್‌ನಾಮೆ.

ಜನರಲ್.

ಇಸ್ತಿಹಾರ್‌ನಾಮೆ.

ತಾರೀಖು 6ನೇ ನವೆಂಬರ್ 1889.

ನಂ. 230.—ಸಕಲ ಜನಗಳಿಗೂ ತಿಳಿಯುವಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ಗ್ರಾಮವು ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಗೆ 11 ಘಂಟೆಗೆ ಹರಾಜು ಶುರುವಾಗಿ ಉಳಿಕೆ ಯಾವದೂ ಇಲ್ಲದೆ ಗ್ರಾಮವು ಚಡದರಬಾಸ್ತುದಾರರಿಗೆ ಹರಾಜು ನಿಲ್ಲುವದು.

2. ಪರಂತು, ಒಂದು ಗ್ರಾಮವು ಬೇರಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷನರವರು ತಮ್ಮ ಯಜ್ಞಾಯೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗ ವೈಕಿ ಕೇವಲಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ ವೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅನ್ವಲ್‌ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜಾ ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಪಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜು ಮುಲ್ತವಿಕೂಫ್ ಮಾಡಲ್ಪಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜ್ ಖಾಯಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜನ್ನು ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಧರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರವರಿಂದ ರುಜು ನೊಪರ್ ಮಾಹೋದ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲ್‌ನಲ್ಲಾಗಲಿ ಅಂದಾಜಾ ಬೀಜವರಿ ವಿಷಯದಲ್ಲಾಗಲಿ ಇರುವ ಗಲ್ಲತ್ತುಗಳಿಗೆ ಸರಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನ ಪಟ್ಟಂತೆ ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲ್‌ನಲ್ಲಿ ಆಗುವ ಆಖೈರ್ ಹುಕುಮಿಗೆ ಸದರೀ ಕ್ರಯವು ವಳಪಟ್ಟು ಯಿರುತ್ತೆ.

ತಾಲ್ಲೂಕು.	ಹೋಬಳಿ.	ಗ್ರಾಮ.	ಜೋಡೀದಾರರ ಹೆಸರು.	ಅಂದಾಜಾ ಬೀಜವರೀ.	ಅಂದಾಜಾ ಹುಟ್ಟುವಳೀ ಯಾ ಜೇರೀಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟರೆಂಟ್.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಟ್ಟಿತ್ತೋ ಅಂಥಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
ಕೋಲಾರ.	ಕೋಲಾರ.	ಬೆಟ್ಟದಹೊಸಹಳ್ಳಿ ಜೋಡೀ ಗ್ರಾಮ.	ಡಿ. ಸೋಮಂಣ ವಗೈರೆರವರು	ಖಂ. ಕೂ. ಪ. 28 13 15½	ರೂ. ಆ. ಪೈ. 46 9 7	ರೂ. ಆ. ಪೈ. 44 12 10	ರೂ. ಆ. ಪೈ. 92 9 8 ಮತ್ತು ಬಡ್ಡೀ ಸಹ	1889ನೇ ಇಸವಿ ಡಿಸಂಬರ್ ತಾರೀಖು 9ರಲ್ಲು ತಾಲ್ಲೂಕ್ ಕಛೇರಿಯಲ್ಲಿ ಅಮಲ್ದಾರ್ರ ರೂಬರೂ.

ಪರಾ.—ಜೋಡೀದಾರರುಗಳಿಂದಲಾಗಲಿ, ಬಾಧ್ಯತೆಯ ಮೂಲಕ ಯಿವರುಗಳಿಗೆ ಹಿಂದೆ ಯಿದ್ದವರಿಂದಾಗಲಿ ಉಂಟುಮಾಡಲ್ಪಟ್ಟ ತಮಾಂ ಹಿಡುವಳಿಗಳಿಗೂ ದೇಣಿಗಳಿಗೂ ಮತ್ತು ಹಕ್ಕುಗಳಿಗೂ ಅಥವಾ ಮತ್ಯಾವ ಸಂಬಂಧಗಳಿಗೂ ಸದರೀ ಹರಾಜು ವಳಪಟ್ಟಿರುವದಿಲ್ಲ.

ತಾರೀಖು 8ನೇ ನವಂಬರ್ 1889.

ನಂ. 233.—ಸಕಲ ಜನಗಳಿಗೂ ತಿಳಿಯುವ ಬಗ್ಯೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಕಾಯಂಗುತ್ತಿಗೆದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಫ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಕಾಯಂಗುತ್ತಾ ಗ್ರಾಮಗಳು ಇದರಡಿ ಕಂಡ ತಖ್ತೆಯಲ್ಲಿ ನಮೂದಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳ್ಗ್ಯೆ 11 ಘಂಟೆಗೆ ಹರಾಜು ಪುರುವಾಗಿ ಉಳಿಕೆ ಯಾವದೂ ಇಲ್ಲದೆ ಗ್ರಾಮವು ಚಡದರಖಾಸ್ತುದಾರರಿಗೆ ಹರಾಜ್ ನಿಲ್ಲುವದು.

2. ಪರಂತು, ಒಂದು ಗ್ರಾಮವು ಬೇರೆಬೇರೆಯಾಗಿ ಮೆಂಜರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷನರವರು ತಮ್ಮ ಯಬ್ತ್ಯಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜ್ ಹಾಕಿಸುವರು.

3. ಕ್ರಯದಾರನು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗ ವೈಕೀ ಕೇಳಿದಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ ವೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಮಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಪಾಕಲ್ಪಡುವವು.

5. ಹರಾಜಿನಲ್ಲಿ ಪರಿಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುಕ್ತಾರೀಕರ ತರೀಕೆ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುಕ್ತಾರೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜು ಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಪಡಿಸತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇವೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜು ಮುಕೂಫ ಮಾಡಲ್ಪಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಖಾಯಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜನ್ನು ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಧರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರೆಜಿಸ್ಟರ್ ಮಾಡಲ್ಪಟ್ಟು, ಡೆಪ್ಯೂಟಿ ಕಮ್ಮಿಷನರವರಿಂದ ರುಜು ಮೊಹರ್ ಮಾಡೋಸಾದ ಒಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲ್ನಲ್ಲಾಗಲಿ ಅಂದಾಜಾ ಬೀಜವರಿ ವಿಷಯದಲ್ಲಾಗಲಿ, ಇರುವ ಗಲ್ಲತಿಗಳಿಗೆ ಸರಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನಪಟ್ಟಂತೆ ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲಿನಲ್ಲಿ ಆಗುವ ಆಜ್ಞೆಯ ಹುಕುಮಿಗೆ ಸದರೀ ಕ್ರಯವು ಒಳಪಟ್ಟು ಇರುತ್ತೆ.

ಜಿಲ್ಲೆ.	ತಾಲ್ಲೂಕು.	ಹೋಬಳಿ.	ಗ್ರಾಮ.	ಕಾಯಂಗುತ್ತಾದಾರರ ಹೆಸರು.	ಅಂದಾಜಾ ಬೀಜವರಿ.	ಅಂದಾಜಾ ಹುಟ್ಟುವಳಿ ಯಾಡಬೇಕಾದ ಪೈರೇಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಪೈರೆಂಟಿ.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಆಂಥಾ ಸರಕಾರದಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
ಕೋಲಾರ.	ಚಿಂತಾಮಣಿ.	ಜಂಗಮಕೋಟೆ.	ನಡಿಪಲಯಿಕನಪಲ್ಲಿ ಕಾಯಂ ಗುತ್ತಾ ಗ್ರಾಮ.	ೀನಪ್ಪ	ಎಕರೆ. ಸೆಂ. 1493—37	ರೂ. ಆ. ಪೈ. 431 0 0	ರೂ. ಆ. ಪೈ. 474 6 3	ರೂ. ಆ. ಪೈ. 1089 1 7 ವ ಬಡ್ಡಿ ಸಹ	ಸನ್ 1889ನೇ ಇಸವಿ ಡಿಸಂಬರ್ ತಾ॥ 16ರಲ್ಲುಳ್ಳ ಫಟ್ಟು ತಾಲ್ಲೂಕುಕಚೇರಿಯಲ್ಲಿ ಅವಲ್ದಾರ್ರ ರೂಬರೂ.

ಸೂರಾ.—ಕಾಯಂಗುತ್ತಾದಾರರುಗಳಿಂದಲಾಗಲಿ, ಬಾಧ್ಯತೆಯ ಮೂಲಕ ಯಿವರುಗಳಿಗೆ ಹಿಂದೆ ಯಿದ್ದವರಿಂದಲಾಗಲಿ, ಉಂಟುಮಾಡಲ್ಪಟ್ಟ ತಮಾಂ ಹಿಡುವಳಿಗಳಿಗೂ, ದೇಣಿಗೆಗಳಿಗೂ ಮತ್ತು ಹಕ್ಕುಗಳಿಗೂ ಅಥವಾ ಮತ್ಯಾವ ಸಂಬಂಧಗಳಿಗೂ ಸದರೀ ಹರಾಜು ವಳಪಟ್ಟಿರುವದಿಲ್ಲ.

ತಾರೀಖು 15ನೇ ನವಂಬರ್ 1889.

ನಂ. 237.—ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನೆಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತೀ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ಗ್ರಾಮಗಳು ಇದರಡಿ ಕಂಡ ತಖ್ತೆಯಲ್ಲಿ ನಮೂದಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವವು. ಮತ್ತು ಸದರೀ ತಾರೀಖಿನಲ್ಲಿ ಬೆಳ್ಗ್ಯೆ 11 ಘಂಟೆಗೆ ಹರಾಜು ಮರುವಾಗಿ ಉಳಿಕೆಯಾವದೂ ಇಲ್ಲದೆ ಗ್ರಾಮವು ಜಡದರಬಾಸ್ತುದಾರರಿಗೆ ಹರಾಜಿ ನಿಲ್ಲುವದು.

2. ಪರಂತು, ಒಂದು ಗ್ರಾಮವು ಜೇರಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯೂಟಿ ಕಮ್ಮಿಷನರವರು ತಮ್ಮ ಯಖ್ತಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಜೇರಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗ್ ಪೈಕೀ ಕೀಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕೀ ಬಾಕಿಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕೀ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುತ್ಪಾನಾಗಿ ಮರಳಿ ಹರಾಜು ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜು ಮಾಡಲ್ಪಟ್ಟ ಬರವಣಿಗೇ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹುಕ್ಕುಟಿಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿಯೂ ಇತರ ಖರ್ಚುಗಳು ದೇಖಿಲೆ ಕಂದಾಯದ ಬಾಕೀ ಮೊಬಲಗನ್ನು ಪೂರಾ ಹಾಜರ್ ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕೀ ಮುಂತಾದ್ದು ಪಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜು ಮವಕೂಫ್ ಮಾಡಲ್ಪಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಖಾಯಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿ, ಹರಾಜನ್ನು ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಫರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರರಿಂದ ರುಜು ಮೊಹರ್ ಮಾಡೋಣಾದ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಹಶೀಲ್ದಾರ್ನಲ್ಲಾಗಲಿ ಅಂದಾಜು ಖೀಜವರಿ ವಿಷಯದಲ್ಲಾಗಲಿ, ಇರುವ ಗಲ್ಲತ್ತಗಳಿಗೆ ಸರಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನ್ ಪಟ್ಟಂತೆ ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲಿನಲ್ಲಿ ಆಗುವ ಆಜ್ಞೈರ್ ಹುಕುಮಿಗೆ ಸದರೀ ಕ್ರಯವು ಬಳಪಟ್ಟು ಯಿರುತ್ತೆ.

ಡಿಸ್ಟ್ರಿಕ್ಟ್.	ತಾಲ್ಲೂಕು.	ಹೋಬ್ಳಿ.	ಗ್ರಾಮ.	ಜೋಡೀದಾರರ ಹೆಸರು.	ಅಂದಾಜಾ ಬೀಜವರಿ.	ಅಂದಾಜಾ ಹುಟ್ಟುವಳಿ ಯಾ ಬೇರಿಜು.	ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟರೆಂಟ್.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಟ್ಟಿತ್ತೋ ಆಂಥಾ ಸರಕಾರದ ಕಂದಾಯದ ಬಾಕಿ.	ಹರಾಜು ತಾರೀಖು ವಗೈರೆ.
					ಖಂ. ಕೊ. ಪ.	ರೂ. ಆ. ಪೈ.	ರೂ. ಆ. ಪೈ.	ರೂ. ಆ. ಪೈ.	
ಕೋಲಾರ	ಚಿಂತಾಮಣಿ	ಇರಗಂಪಲ್ಲಿ	ಮಂಡಗಲ್ಲು ಜೋಡೀ ಗ್ರಾಮ	ರಂಗಮ್ಮ ಕೋನಿ ವಾಸುಚಾರಿ ವಗೈರೇರು	125 11 1/8	1500 0 0	1053 2 0	2568 1 9	1889ನೇ ಇಸವಿ ಡಿಸಂಬರ್ ತಾರೀಖು 21ರಲ್ಲು ಚಿಂತಾಮಣೀ ತಾಲ್ಲೂಕು ಕಛೇರಿಯಲ್ಲಿ ಅಮಲ್ದಾರ್ ರೂ ಖರೂ

ಪರಾ.—ಜೋಡೀದಾರರುಗಳಿಂದಲಾಗಲಿ, ಬಾಧ್ಯತೆಯ ಮೂಲಕ ಯಿವರುಗಳಿಗೆ ಹಿಂದೆ ಯಿದ್ದವರಿಂದಲಾಗಲಿ, ಉಂಟುಮಾಡಲ್ಪಟ್ಟ ತಮಾಂ ಹಿಡುವಳಿಗಳಿಗೂ, ದೇಣಿಗಳಿಗೂ, ಮತ್ತು ಹಕ್ಕುಗಳಿಗೂ ಅಥವಾ ಮತ್ಯಾವ ಸಂಬಂಧಗಳಿಗೂ ಸದರೀ ಹರಾಜು ವಳಪಟ್ಟಿರುವದಿಲ್ಲ.

ತಾರೀಖು 7ನೇ ನವೆಂಬರ್ 1889.

ನಂ. 232.—ಮಂಡ್ಯದ ತಾಲ್ಲೂಕು ಅಮಲ್ದಾರ್ ಸರಸಂಣನವರಿಗೆ, ಸ್ಯ 1889ನೇ ಇಸವಿ ಫಿಬ್ರವರೀ 5ನೇ ಮರ್ಕೂಂ 7140—71-200ನೇ ನಂಬರುಳ್ಳ ಪ್ರೊಸೀಡಿಂಗ್ಸ್‌ನಲ್ಲಿ ಫಾಯಿಷ್ ಮಾಡೋಣಾದ ರೂಲ್ಸ್‌ಗಳ 1ನೇ ನಿಬಂಧನೆಯನ್ನನುಸರಿಸಿ, 1889ನೇ ಇಸವಿ ಅಕ್ಟೋಬರ್ 16ನೇ ತಾರೀಖು ಲಾಗಾಯತು ನಾಲ್ಕು ದಿವಸಗಳ ಕ್ಯಾಜುಯಲ್ ರಜಾ ಕೊಡಲ್ಪಟ್ಟಿರುತ್ತೆ.

ಕ್ಯಾಂಪ್ ನಂ. 731.—ಯಿದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನೆಂದರೆ, ಫಾರೆಸ್ಟ್ ಇನ್‌ಸ್ಪೆಕ್ಟರ್ ಜನರಲ್‌ಯವರ ಹುಕುಂ ಅನುಸರಿಸಿ ಜಾರೀಲಿ ಬರುವ ತಾರೀಖು ಲಾಗಾಯತು ಚಿತ್ರದುರ್ಗ ಡಿಸ್ಟ್ರಿಕ್ಟಿನೊಳಗೆ ತಂಗಡಿ ಚಕ್ಕೆಗಾಗಿ ಭಂಡಿ ಬೋಜೆ 1ಕ್ಕೆ 20 ರೂಪಾಯಿವರಿಗೆ ತೀರ್ವೆ ಚಾಸ್ತೀ ಮಾಡಲ್ಪಟ್ಟಿರುತ್ತೆ.

ತಾರೀಖು 7ನೇ ನವೆಂಬರ್ 1889.

ಕ್ಯಾಂಪ್ ನಂ. 733.—ಶಿವಮೊಗ್ಗ ಡಿಸ್ಟ್ರಿಕ್ಟು ಪೊಲೀಸ್ ಅಸಿಸ್ಟೆಂಟ್ ಕಮ್ಮಿಷನರ್ ವ 3ನೇ ಕ್ಲಾಸ್ ಮಾಜಿಸ್ಟ್ರೇಟ್ ಮೆ॥ ಕೆ. ಪಿ. ಪುಟ್ಟಣಶೆಟ್ಟಿಯವಂಗೆ, ಕ್ರಿಮಿನಲ್ ಪ್ರೊಸಿಜ್ಯೂರ್ ಕೋಡಿನ 357ನೇ ಸೆಕ್ಷನ್ ಅನುಸರಿಸಿ, ಸಾಕ್ಷಿಗಳ ಖೈಫೀಯತನ್ನ ಇಂಗ್ಲಿಷ್ ಭಾಷೆಯಲ್ಲಿ ಸ್ವದಸ್ತೂರು ತೆಗದುಕೊಳ್ಳಲಿಕ್ಕೆ ಯಿವರ ದೆಸೆಯಿಂದ ಅಧಿಕಾರ ಕೊಡೋಣಾಗಿರುತ್ತದೆ.

ತಾರೀಖು 8ನೇ ನವೆಂಬರ್ 1889.

ಕ್ಯಾಂಪ್ ನಂ. 724.—ಇದರಡಿ ನಮೂದಾಗುವ ವರ್ಗಾವರ್ಗಿ ವ ಮೊಕರರಾತಿಗಳು ಹುಕುಂ ಮಾಡಲ್ಪಟ್ಟಿರುತವೆ.

ಹುದ್ದೆ.	ಹೆಸರು.	ಯಾವ ಕೆಲಸಂದಿದ.	ಯಾವ ಕೆಲಸಕ್ಕೆ.	ಷರಾ.
ಸಬ್ ಪ್ರೋಟೆಂ ಸಿವಿಲ್ ಸರ್ಜನ್	ಮೆ॥ ಡಿ. ಯೆ. ಜೋಕ್ಸೆ, ಎಲ್. ಯಂ. ಯಸ್.	ಶಿವಮೊಗ್ಗ ಡಿ॥ ಸಿವಿಲ್ ಸರ್ಜನ್ ಕೆಸದಿಂದ	ಮೆ॥ ಲಿಂಕ್ಕಯವರು ರಜಾದ ಮೇಲೆ ಯಿರುವವರ್ಯಂತ ಯಾ ಮತ್ತೊಂದು ಹುಕ್ಕುಂ ಕೊಡುವವರಿಗೆ ಕಡೂರು ಡಿಸ್ಟ್ರಿಕ್ಟ್ ಸಿವಿಲ್ ಸರ್ಜನ್ ಕೆಲಸಕ್ಕೆ ಆಕ್ಟಿಂಗ್ ತರೀಕು	ಚಾರ್ಜ್ ವಹಿಸಿದ ತರುವಾಯ ಕೆಲಸದ ಮೇಲೆ ಹೋಗತಕ್ಕದ್ದು
1ನೇ ಗ್ರೇಡ್ ಅಸಿಸ್ಟೆಂಟ್ ಸರ್ಜನ್	ಎ. ಯಸ್. ಫರ್ನಾಂಡಜ್ ಯಂ. ಡಿ.	ಮೈಸೂರು ಗವರ್ನಮೆಂಟ್ ಸೀನಿಯರ್ ಸರ್ಜರಿಗೆ ಚೀಫ್ ಅಸಿಸ್ಟೆಂಟ್	ಮೆ॥ ಜೋಕ್ಸೆಯವರು ರಜಾದಮೇಲಿರುವ ಪರ್ಯಂತ ಯಾ ಮತ್ತೊಂದು ಹುಕುಂ ಕೊಡುವವರಿಗೆ ಸಿವಿಲ್ ಸರ್ಜನ್ ಕೆಲಸ ನೋಡತಕ್ಕದ್ದು	ಡಿಟೋ
ಡಿಟೋ	ಜೆ. ಎ. ಕಾಸ್ಟೆಲ್ಲೊ	ಮೈಸೂರು ಜನರಲ್ ಆಸಪತ್ರೀ ಕೆಲಸದಿಂದ	ಬೆಂಗಳೂರಲ್ಲಿ ಗವರ್ನಮೆಂಟ್ ಸೀನಿಯರ್ ಸರ್ಜರಿಗೆ ಚೀಫ್ ಅಸಿಸ್ಟೆಂಟ್ ಕೆಲಸ ನೋಡತಕ್ಕದ್ದು.	ಅಸಿಸ್ಟೆಂಟ್ ಸರ್ಜನ್ ಟಿ. ವಿ. ಆರ್‌ಮುಗಂ ಮೊದಲಿಯಾರ್ರು ಚಾರ್ಜ್ ವಹಿಸಿಕೊಂಡ ನಂತರ ಕೆಲದ ಮೇಲೆ ಹೋಗತಕ್ಕದ್ದು
3ನೇ ಡಿಟೋ	ಟಿ. ವಿ. ಆರ್‌ಮುಗಂ ಮೊದಲಿಯಾರ್ ಯಂ. ಬಿ.	ಬೆಂಗಳೂರು ಸೆಂಟ್ ಮಾರ್ತಾ ಆಸಪತ್ರೆಯ ರೆಸಿಡೆಂಟ್ ಅಸಿಸ್ಟೆಂಟ್ ಸರ್ಜನ್ ಕೆಲಸದಿಂದ	ಮೈಸೂರು ಜನರಲ್ ಆಸಪತ್ರೆಯಲ್ಲಿ ಕೆಲಸ ನೋಡತಕ್ಕದ್ದು	ಕೂಡ್ಲೆ ಕೆಲಸದ ಮೇಲೆ ಹಾಜರಾಗತಕ್ಕದ್ದು
1ನೇ ಕ್ಲಾಸ್ ಅಸ್ಪಟಲ್ ಅ॥	ಬಿ. ಕೃಷ್ಣರಾವ್ ಯಲ್. ಯಂ. ಯಸ್.	ಸೆಂಟ್ ಮಾರ್ತಾ ಆಸಪತ್ರೆಯ ಕೆಲಸದಿಂದ	ಅಸಿಸ್ಟೆಂಟ್ ಸರ್ಜನ್ ನೊರ್ರೊಹಾಯವರು ರಜಾದ ಮೇಲಿರುವ ಪರ್ಯಂತ ಯಾ ಮತ್ತೊಂದು ಹುಕುಂ ಕೊಡುವವರಿಗೆ ಕೋಲಾರ್ ಡಿಸ್ಟ್ರಿಕ್ಟ್ ಹೆಡ್ ಕ್ವಾರ್ಟರಿನಲ್ಲಿ ಕೆಲಸ ನೋಡತಕ್ಕದ್ದು	ಡಿಟೋ

ತಾರೀಖು 9ನೇ ನವೆಂಬರ್ 1889.

ನಂ. 758.—ಅಸಿಸ್ಟೆಂಟ್ ಸರ್ಜನ್ ಯೆ. ಯಸ್. ಫರ್ನಾಂಡಜ್ ಯಂ. ಡಿ. ಯವರಿಗೆ, ಅವರು ಪ್ರಯೋಗಿಸಿಕೊಳ್ಳುವ ತಾರೀಖು ಲಾಗಾಯತು ಯರಡು ತಿಂಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು 11ನೇ ನವೆಂಬರ್ 1889.

ನಂ. 765.—ಕೋಲಾರ್ ಡಿಸ್ಟ್ರಿಕ್ಟು ಅಸಿಸ್ಟೆಂಟ್ ಕಮ್ಮಿಷನರ ವ 2ನೇ ಕ್ಲಾಸ್ ಮಾಜಿಸ್ಟ್ರೇಟ್ ಮೆ॥ ಬಿ. ಕೃಷ್ಣಯ್ಯಂಗಾರ್ರಿಗೆ 1ನೇ ಕ್ಲಾಸ್ ಮಾಜಿಸ್ಟ್ರೇಟ್ ಅಧಿಕಾರವನ್ನ ಹಂಗಾಮಿ ತರೀಕ್ ಕೊಡಲ್ಪಟ್ಟಿರುತ್ತೆ.

ಇಸ್ತಿಹಾರ್‌ನಾಮೆ (ತಿದ್ದುಪಾಟಾದ್ದು)

ತಾರೀಖು 28ನೇ ಅಕ್ಟೋಬರ್ 1889.

ನಂ. 218.—ಸ್ಯ 1870ನೇ ಇಸವಿಯ Xನೇ ಲ್ಯಾಂಡ್ ಅಕ್ವಿಜಿಷನ್ ಆಕ್ಟಿನ 6ನೇ ಸೆಕ್ಷನ್ ಅನುಸರಿಸಿ ಇದರಿಂದ ತಿಳಿಯಪಡಿಸುವದೇನಂದರೆ—ಇದರಡಿ ಕಂಡ ತಖ್ತೆಯಲ್ಲಿ ನಮೂದಾಗುವ ಜಮೀನು ಸರ್ಕಾರದ ಕೆಲಸಕ್ಕಾಗಿ ಅಂದರೆ, ಅಜ್ಜಂಪುರದ ಗ್ರಾಮ ನಿವೇಶನವನ್ನ ಬಡಾಯಿಸತಕ್ಕ ಬಗ್ಯಾಗಿ ಜೇಕಾಗಿರುತ್ತದೆ.

ಜಿಲ್ಲೆ	ತಾಲ್ಲೂಕು	ಹೋಬಳಿ	ಗ್ರಾಮ	ಹಿಡುವಳಿದಾರರ ಹೆಸರು	ಜಮ್ಮಾ ತರಹೆ ಬೀಜವರಿ ವ ಕಂದಾಯ				ಷರಾ.
					ತರಹೆ ವ ನಂಬರ್.	ಬೀಜವರಿ.	ಕಂದಾಯ.		
						ಎ. ಗುಂಟೆ	ರೂ.	ಆ.	ಪೈ.
ಕಡೂರು	ತರೀಕೆರೆ	ಅಜ್ಜಂಪುರ	ಅಜ್ಜಂಪುರ	ಪೈಪೈ ದೊಡ್ಡದೇವರ ಪೈಪೈ ನಾಡಿಗ ರಾಘ	ಖುಷ್ಕಿ ನಂಬರ್ 83	8—7	8	8	0 ಈ ಪೂರಾ ನಂಬರು ಬೇಕಾಗಿರುತ್ತದೆ
						1—31	1	8	0
				ಜುಮ್ಲಾ		9—38	10	0	0

ಹುಕುಂ ಬಮೋಜೀಬ್,
ಆರ್. ವಿಜಯೀಂದ್ರರಾವ್,
ಜೀಫ್ ಸೆಕ್ರಿಟರಿ.

ವಿದ್ಯಾಭ್ಯಾಸದ ಇಲಾಖಾ.

ಸ್ಯ 1889ನೇ ಇಸವಿ ನವೆಂಬರ್ ತಾರೀಖು 14.

ಮೈಸೂರು ದೇಶೀಯೆ ಪರೀಕ್ಷೆ.

ಸ್ಯ 1890ನೇ ಇಸವೀಲಿ ನಡೆಯುವ ಮೈಸೂರು ದೇಶೀಯ ವಿದ್ಯಾರ್ಥಿಗಳ ಪರೀಕ್ಷೆಗಾಗಿ ಇದರಡಿ ಕಂಡಂತೆ ಬಹುಮಾನಗಳು ಕೊಡಲ್ಪಡುವವು:—

(1) ಯಡೇಹಳ್ಳಿ ಮುನ್ಸೀಫ್ ಕೋರ್ಟು ಗುಮಾಸ್ತೆ ಮು|| ರಾ|| ಎಚ್. ಶಾಮಣ್ಣನವರಿಂದ ,ಯಡೇಹಳ್ಳಿ ತಾಲ್ಲೂಕು ಗವರ್ಮೆಂಟ್ ಕನ್ನಡ ಸ್ಕೂಲಿನಿಂದ ತೇರ್ಗಡೆ ಹೊಂದುವವರ ಪೈಕಿ ಪದ್ಯಸಾರದಲ್ಲಿ ಅಧಿಕ ನಂಬರುಗಳನ್ನು ಹೊಂದುವಂಥಾ ಒಬ್ಬ ವಿದ್ಯಾರ್ಥಿಗೆ, ದೊಡ್ಡ ಅಕ್ಷರದ ಮೂಲ ಜೈಮಿನಿ.

(2) ಯಡೇಹಳ್ಳಿ ಮುನ್ಸೀಫ್ ಕೋರ್ಟು ಕಾಪೀಸ್ಟ್, ಮು|| ರಾ|| ಎಚ್. ಸೂರ್ಯನಾರಾಯಣಪ್ಪನವರಿಂದ, ಯಡೇಹಳ್ಳಿ ತಾಲ್ಲೂಕು ಗವರ್ಮೆಂಟ್ ಕನ್ನಡ ಸ್ಕೂಲಿನಿಂದ ತೇರ್ಗಡೆ ಹೊಂದುವವರ ಪೈಕಿ ವ್ಯಾಕರಣದಲ್ಲಿ ಅಧಿಕ ನಂಬರುಗಳನ್ನ ಪಡೆಯುವ ಒಬ್ಬ ವಿದ್ಯಾರ್ಥಿಗೆ ದುರ್ಗೇಶನಂದಿ.

(3) ಮೇಲ್ಕೋಟೆ ಗವರ್ಮೆಂಟ್ ಕನ್ನಡ ಸ್ಕೂಲ್ ಹೆಡ್‌ಮಾಸ್ಟರ್, ಮು|| ರಾ|| ಎಂ. ಜಿ. ಶಾಮಯ್ಯಂಗಾರ್ರವರಿಂದ ಮೇಲ್ಕೋಟೆ ಗವರ್ಮೆಂಟ್ ಕನ್ನಡ ಸ್ಕೂಲಿನಿಂದ ತೇರ್ಗಡೆ ಹೊಂದುವವರ ಪೈಕಿ ಅಧಿಕ ನಂಬರುಗಳನ್ನು ಪಡೆಯುವಂಥಾ ಒಬ್ಬ ವಿದ್ಯಾರ್ಥಿಗೆ, ಕನ್ನಡ ಲಿಂಗಾಭಟ್ಟೀಯ.

ಎಲ್. ರೈಸ್,
ಎಜ್ಯುಕೇಷನ್ ಸೆಕ್ರಟರಿ.